# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 442 |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರಕಾಶ್ ಕೆ ರಾಥೋಡ್ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 19/07/2024 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲೆಯಲ್ಲಿ ಎಷ್ಟು ಕಾರ್ಮಿಕರು ತಮ್ಮ ಹೆಸರುಗಳನ್ನು ನೋಂದಾಯಿಸಿ ಕೊಂಡಿದ್ದಾರೆ; (ತಾಲ್ಲೂಕುವಾರು ವಿವರ ನೀಡುವುದು) | ವಿಜಯಪುರ ಜಿಲ್ಲೆಗೆ ಸಂಬಂಧಿಸಿದಂತೆ ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಮಂಡಳಿಗಳ ಮೂಲಕ ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಫಲಾನುಭವಿಗಳಾಗಿ ನೋಂದಾಯಿತರಾದ ಕಾರ್ಮಿಕರ ಸಂಖ್ಯೆ ಲಭ್ಯವಿದ್ದು ವಿವರ ಈ ಕೆಳಕಂಡಂತಿದೆ.<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br>ಈ ಮಂಡಳಿಯ ಫಲಾನುಭವಿಗಳಾಗಿ ವಿಜಯಪುರ ಜಿಲ್ಲೆಯಲ್ಲಿ 2,08,747 ಕಟ್ಟಡ ಕಾರ್ಮಿಕರು ನೋಂದಾಯಿಸಿಕೊಂಡಿರುತ್ತಾರೆ ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ: |

| ಕ್ರ ಸಂ | ತಾಲೂಕಿನ ಹೆಸರು | ನೋಂದಣಿ ಸಂಖ್ಯೆ |
|---|---|---|
| 01 | ಕಾರ್ಮಿಕ ನಿರೀಕ್ಷಕರು, 1ನೇ ವೃತ್ತ, ವಿಜಯಪುರ | 43204 |
| 02 | ಕಾರ್ಮಿಕ ನಿರೀಕ್ಷಕರು, 2ನೇ ವೃತ್ತ, ವಿಜಯಪುರ | 46310 |
| 03 | ಕಾರ್ಮಿಕ ನಿರೀಕ್ಷಕರು, ಸಿಂದಗಿ ವೃತ್ತ ಸಿಂದಗಿ | 22802 |
| 04 | ಕಾರ್ಮಿಕ ನಿರೀಕ್ಷಕರು, ಇಂಡಿ ವೃತ್ತ ಇಂಡಿ | 19485 |
| 05 | ಕಾರ್ಮಿಕ ನಿರೀಕ್ಷಕರು, ಮುದ್ದೇಬಿಹಾಳ ವೃತ್ತ ಮುದ್ದೇಬಿಹಾಳ | 41135 |
| 06 | ಕಾರ್ಮಿಕ ನಿರೀಕ್ಷಕರು, ಬಬಾಗೇವಾಡಿ ವೃತ್ತ ಬಬಾಗೇವಾಡಿ | 35811 |
| | ಒಟ್ಟು | **208747** |

**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**

ಈ ಮಂಡಳಿಯು ಜಾರಿಗೊಳ್ಳುತ್ತಿರುವ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳು/ಕೋವಿಡ್-19ರ ವಿಶೇಷ ಪ್ಯಾಕೇಜ್‌ನಡಿ ಹಾಗೂ ಅಸಂಘಟಿತ ಕಾರ್ಮಿಕರ ದತ್ತಾಂಶ ಸಂಗ್ರಹಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಅಭಿವೃದ್ಧಿಪಡಿಸಿದ ಇ-ಶ್ರಮ್ ಪೋರ್ಟಲ್‌ನಲ್ಲಿ ನೋಂದಾಯಿತರಾದ ವಿಜಯಪುರಕ್ಕೆ ಸಂಬಂಧಿಸಿದ ಅಸಂಘಟಿತ ಕಾರ್ಮಿಕರ ತಾಲ್ಲೂಕುವಾರು ವಿವರ ಈ ಕೆಳಗಿನಂತಿದೆ:-

| ತಾಲ್ಲೂಕು | ಅಪಘಾತ ಪರಿಹಾರ ಯೋಜನೆ (ಸಾರಿಗೆ ದತ್ತಾಂಶದ ಪ್ರಕಾರ) | ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ | ಕೋವಿಡ್–19ರ ವಿಶೇಷ ಪ್ಯಾಕೇಜ್ | ಇ–ಶ್ರಮ್ ಪೋರ್ಟಲ್ | ಗಿಗ್ ಕಾರ್ಮಿಕರ ವಿಮಾ ಯೋಜನೆ | ದಿನ ಪತ್ರಿಕೆ ವಿತರಕರ ಅಪಘಾತ ಪರಿಹಾರ ಯೋಜನೆ |
|---|---|---|---|---|---|---|
| ಬಸವನ ಬಾಗೇವಾಡಿ | 4555 | 368 | 4193 | 551626 (ತಾಲ್ಲೂಕುವಾರು ಮಾಹಿತಿ ಲಭ್ಯವಿರುವುದಿಲ್ಲ) | 23 | 169 (ತಾಲ್ಲೂಕುವಾರು ಮಾಹಿತಿ ಲಭ್ಯವಿರುವುದಿಲ್ಲ) |
| ಇಂಡಿ | 4771 | 421 | 5045 | | 09 | |
| ಮುದ್ದೇಬಿಹಾಳ | 6628 | 492 | 2086 | | 13 | |
| ಸಿಂದಗಿ | 5289 | 77 | 4063 | | 02 | |
| ವಿಜಯಪುರ | 12765 | 3704 | 10858 | | 106 | |
| ಒಟ್ಟು | 34008 | 5062 | 26245 | 5,51,626 | 153 | 169 |

**<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:</u>**

ಈ ಮಂಡಳಿಯಲ್ಲಿ ಕಾರ್ಮಿಕರು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಅವಕಾಶವಿರುವುದಿಲ್ಲ. ವಂತಿಕೆ ಪಾವತಿಸುವ ಕಾರ್ಮಿಕರು ಮಂಡಳಿಯಿಂದ ನೀಡುವ ಸೌಲಭ್ಯಗಳನ್ನು ಪಡೆಯುತ್ತಾರೆ.

ವಿಜಯಪುರ ಜಿಲ್ಲೆಯಲ್ಲಿ 10965 ಕಾರ್ಮಿಕರು 2023-24ನೇ ಸಾಲಿನಲ್ಲಿ ವಂತಿಕೆಯನ್ನು ಪಾವತಿಸಿರುತ್ತಾರೆ.

| | | |
|---|---|---|
| ಆ) | ಸರ್ಕಾರದಿಂದ ಕಾರ್ಮಿಕರಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗಿದೆ; (ವಿವರ ನೀಡುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಮಂಡಳಿಗಳ ಮೂಲಕ ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಫಲಾನುಭವಿಗಳಾಗಿ ನೋಂದಾಯಿತರಾದ ಕಾರ್ಮಿಕರಿಗೆ ನೀಡುತ್ತಿರುವ ಸೌಲಭ್ಯಗಳ ವಿವರ ಈ ಕೆಳಕಂಡಂತಿದೆ. |

**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**

ಈ ಮಂಡಳಿಯ ವತಿಯಿಂದ ನೋಂದಾಯಿತ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರಿಗೆ ವಿತರಿಸಲಾಗುತ್ತಿರುವ ಸೌಲಭ್ಯಗಳ ವಿವರವನ್ನು **ಅನುಬಂಧ** ದಲ್ಲಿ ಒದಗಿಸಿದೆ.

**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:**

ಈ ಮಂಡಳಿಯು ಈ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದ್ದು, ವಿವರ ವಿವರ ಈ ಕೆಳಕಂಡಂತಿದೆ:-

**(1) ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-**

ಈ ಯೋಜನೆಯಡಿ ಖಾಸಗಿ ವಾಣಿಜ್ಯ ಸಾರಿಗೆ ವಾಹನಗಳ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳಿಗೆ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

**(ಅ) ಅಪಘಾತ ಪರಿಹಾರ:**

ಅಪಘಾತದಿಂದ ಮೃತರಾದ ಪ್ರಕರಣಗಳಲ್ಲಿ ಅವರ ನಾಮನಿರ್ದೇಶಿತರಿಗೆ ರೂ. 5 ಲಕ್ಷ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಪ್ರಕರಣಗಳಲ್ಲಿ ರೂ.2 ಲಕ್ಷಗಳವರೆಗೆ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದ ವರೆಗೆ ಚಿಕಿತ್ಸಾ ವೆಚ್ಚ ಮರುಪಾವತಿ ಮಾಡಲಾಗುತ್ತಿದೆ.

**(ಆ) ಶೈಕ್ಷಣಿಕ ಧನ ಸಹಾಯ:**

ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಒಂದನೇ ತರಗತಿಯಿಂದ ಪದವಿಪೂರ್ವ ತರಗತಿಯ ವರೆಗೆ ವ್ಯಾಸಂಗ ಮಾಡಲು ವಾರ್ಷಿಕ ತಲಾ ರೂ.10,000/-ರಂತೆ ಶೈಕ್ಷಣಿಕ ಸಹಾಯ ಧನ ವಿತರಿಸಲಾಗುತ್ತಿದೆ.

ವಿಜಯಪುರ ಜಿಲ್ಲೆಗೆ ಸಂಬಂಧಿಸಿದಂತೆ ಒದಗಿಸಲಾದ ಸದರಿ ಸೌಲಭ್ಯಗಳ ವಿವರ ಈ ಕೆಳಗಿನಂತಿದೆ:

(ರೂ.ಗಳಲ್ಲಿ)

| **ಅಪಘಾತ ಪರಿಹಾರ** | | **ಶೈಕ್ಷಣಿಕ ಧನ ಸಹಾಯ** | |
|---|---|---|---|
| ಪ್ರಕರಣಗಳ ಸಂಖ್ಯೆ | ಪರಿಹಾರ ಮೊತ್ತ | ವಿದ್ಯಾರ್ಥಿಗಳ ಸಂಖ್ಯೆ | ಮೊತ್ತ |
| 51 | 2,18,76,283 | 9 | 90,000/- |

| | | |
|---|---|---|
| | | **ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:**<br>ಈ ಮಂಡಳಿಗೆ ಸಂಘಟಿತ ಕಾರ್ಮಿಕರಿಂದ ರೂ 20/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ 40/- ರಂತೆ ಹಾಗೂ ಸರ್ಕಾರದಿಂದ ಪ್ರತಿ ಕಾರ್ಮಿಕರಿಗೆ ರೂ. 20/- ರಂತೆ ವಂತಿಗೆಯಾಗಿ ಪಾವತಿಸಲಾಗುತ್ತಿದೆ. ಈ ವಂತಿಗೆಯ ಮೊತ್ತವನ್ನು ಸಂಘಟಿತ ಕಾರ್ಮಿಕರಿಗೆ ಕಲ್ಯಾಣ ಯೋಜನೆಗಳಡಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br>1. ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ.<br>2. ಕಾರ್ಮಿಕರಿಗೆ ವೈದ್ಯಕೀಯ ನೆರವು.<br>3. ಕಾರ್ಮಿಕರಿಗೆ ಅಪಘಾತ ಧನ ಸಹಾಯ.<br>4. ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯ.<br>5. ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ<br>6. ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ ಸಂಸ್ಥೆಗಳಿಗೆ ಧನಸಹಾಯ<br>7. ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ. |
| ಇ) | ಎಷ್ಟು ಜನ ಕಾರ್ಮಿಕರು ಸರ್ಕಾರದಿಂದ ದೊರೆಯುವ ಸೌಲಭ್ಯ ಪಡೆಯಲು ಅರ್ಹರಿದ್ದಾರೆ; ಎಷ್ಟು ಜನ ಕಾರ್ಮಿಕರು ಅನರ್ಹರಿದ್ದಾರೆ? (ತಾಲ್ಲೂಕುವಾರು ವಿವರ ನೀಡುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಮಂಡಳಿಗಳ ಮೂಲಕ ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ನಿಗದಿಪಡಿಸಿದ ಮಾನದಂಡಗಳ ಅನ್ವಯ ನೋಂದಾಯಿತರಾದ ಎಲ್ಲಾ ಕಾರ್ಮಿಕರೂ ಅರ್ಹ ಫಲಾನುಭವಿಗಳಾಗಿರುತ್ತಾರೆ. ವಿವಿಧ ಯೋಜನೆಗಳಡಿ ಸೌಲಭ್ಯಗಳನ್ನು ವಿತರಿಸುವ ಸಂದರ್ಭದಲ್ಲಿ ಇರಬೇಕಾದ ಮಾನದಂಡಗಳನ್ನು ಪೂರೈಸದ ಕಾರ್ಮಿಕರನ್ನು ಅನರ್ಹ ಕಾರ್ಮಿಕರೆಂದು ಪರಿಗಣಿಸಲಾಗುವುದು.<br><br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**<br>ಪ್ರಸ್ತುತ ಮಂಡಳಿಗಳಲ್ಲಿ ಅರ್ಹ ಫಲಾನುಭವಿಗಳಾಗಿ ನೋಂದಾಯಿತರಾದ ಕಾರ್ಮಿಕರ ಸಂಖ್ಯೆ 38.44 ಲಕ್ಷಗಳಾಗಿರುತ್ತದೆ.<br><br>ಮಂಡಳಿಯ ಎಲ್ಲಾ ಸೌಲಭ್ಯಗಳನ್ನು ನಿಯಮಗಳಲ್ಲಿ ನಿಗಧಿಪಡಿಸಿರುವ ಮಾನದಂಡಗಳನ್ವಯ ನೀಡಲಾಗುತ್ತಿದೆ. ಈ ಎಲ್ಲಾ ಯೋಜನೆಗಳು ಘಟಾನಾದಾರಿತವಾಗಿದ್ದು, ಫಲಾನುಭವಿಗಳು ನಿಯಮಗಳಲ್ಲಿ ನಿಗಧಿಪಡಿಸಿರುವ ಅರ್ಹತೆಗಳಿಗನುಗುಣವಾಗಿ ಈ ಸೌಲಭ್ಯಗಳನ್ನು ಪಡೆದುಕೊಳ್ಳಬಹುದು. |

| | | |
|---|---|---|
| | | ವಿಜಯಪುರ ಜಿಲ್ಲೆಯಲ್ಲಿ ನೋಂದಣಿಯಾಗಿ ಸದಸ್ಯತ್ವವು ಚಾಲ್ತಿಯಲ್ಲಿರುವ ಫಲಾನುಭವಿಗಳ ವಿವರಗಳನ್ನು **ಉಪ ಪ್ರಶ್ನೆ –ಅ** ರಲ್ಲಿ ಒದಗಿಸಲಾಗಿರುತ್ತದೆ. ನೋಂದಾಯಿತ ಫಲಾನುಭವಿಗಳು ಕಾಯ್ದೆ ಮತ್ತು ನಿಯಮಗಳಲ್ಲಿ ನಿಗಧಿಪಡಿಸಿರುವ ಮಾನದಂಡಗಳನ್ನು ಪಾಲಿಸದಿದ್ದಲ್ಲಿ ಅವರು ಅನರ್ಹರಾಗಿರುತ್ತಾರೆ.<br><br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>ಈ ಮಂಡಳಿಯು ಮೇಲಿನ ಕಂಡಿಕೆ (ಅ) ದಲ್ಲಿ ನಮೂದಿಸಿರುವ ಸಾಮಾಜಿಕ ಭದ್ರತಾ ಯೋಜನೆಗಳನ್ನು ಜಾರಿಗೊಳಿಸುತ್ತಿದ್ದು, ಸದರಿ ಯೋಜನೆಗಳಡಿ ನೋಂದಾಯಿತ ಎಲ್ಲಾ ಕಾರ್ಮಿಕರು ಸಂಬಂಧಿಸಿದ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.<br><br>ಆದರೆ, ಸೌಲಭ್ಯಗಳನ್ನು ವಿತರಿಸುವ ಸಮಯದಲ್ಲಿ ಯೋಜನೆಯ ಮಾರ್ಗಸೂಚಿಯನ್ವಯ ಸಲ್ಲಿಸಿದ ದಾಖಲೆಗಳನ್ನು ಕೂಲಂಕುಷವಾಗಿ ಪರಿಶೀಲಿಸಿ ಸ್ಥಳ ಪರಿಶೀಲನೆ ನಡೆಸಿ ಅರ್ಹತೆಯ ಆಧಾರದ ಮೇಲೆ ಪರಿಹಾರವನ್ನು ಒದಗಿಸಲಾಗುತ್ತಿದೆ.<br><br>**<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:</u>**<br>ಮಂಡಳಿಗೆ ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಕಾಯ್ದೆಯನ್ವಯ ವಂತಿಕೆ ಪಾವತಿಸುವ ಸಂಘಟಿತ ಕಾರ್ಮಿಕರೆಲ್ಲರೂ ಅರ್ಹ ಫಲಾನುಭವಿಗಳಾಗಿದ್ದು, ಮಂಡಳಿ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ. |

**ಕಾಇ 293 ಎಲ್‌ಇಟಿ 2024**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**

# ಅನುಬಂಧ

## ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರಕಾಶ್ ಕೆ ರಾಥೋಡ್ (ನಾಮನಿರ್ದೇಶನ ಹೊಂದಿದವರು) ಅವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 442 (423)

## ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ

**ಮಂಡಳಿಯ ವತಿಯಿಂದ ಅನುಷ್ಠಾನಗೊಳಿಸಿರುವ ಸೌಲಭ್ಯಗಳು ಮಂಡಳಿಯ ನೋಂದಾಯಿತ ಫಲಾನುಭವಿಗಳಿಗೆ ಮತ್ತುಅವರ ಅವಲಂಭಿತರಿಗೆ ಸಹಾಯಧನ ನೀಡಲು ಈ ಕೆಳಕಂಡ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಲಾಗಿದೆ:**

1. **ಪಿಂಚಣಿ ಸೌಲಭ್ಯ: ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ. 3,000/-**
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ/ಪತ್ನಿಗೆ ಮಾಸಿಕ **ರೂ.1500/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ /ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ **ರೂ. 2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ. 2,00,000/-** ದವರೆಗೆ ಅನುಗ್ರಹರಾಶಿ ಸಹಾಯಧನ.
4. **ಟ್ರೆನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ. 20,000/- ವರೆಗೆ**
5. **ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
6. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ. 50,000/-
7. **ಅಂತ್ಯಕ್ರಿಯೆ ವೆಚ್ಚ:ರೂ. 4,000/-** ಹಾಗೂ ಅನುಗ್ರಹ ರಾಶಿ **ರೂ. 71,000/-**ಸಹಾಯಧನ
8. ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:

| ಕ್ರ ಸಂ | ವಿದ್ಯಾಭ್ಯಾಸದ ವಿವರ (ತರಗತಿ ಅಥವಾ ಕೋರ್ಸ್ ಅಥವಾ ಗ್ರೇಡ್) | ವಾರ್ಷಿಕ ಶೈಕ್ಷಣಿಕ ಸಹಾಯಧನ ಮೊತ್ತ (ರೂ. ಗಳಲ್ಲಿ) |
|---|---|---|
| 1 | 1 ರಿಂದ 5 ನೇ ತರಗತಿ | 1,800 |
| 2 | 6 ರಿಂದ 8 ನೇ ತರಗತಿ | 2,400 |
| 3 | 9 ಹಾಗೂ 10ನೇ ತರಗತಿ | 3,000 |
| 4 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 4,600 |
| 5 | ಪದವಿ | 10,000 |
| 6 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿ ಕೋರ್ಸ್ | 10,000 |
| 7 | ಸ್ನಾತಕ್ಕೊತ್ತರ ಪದವಿ | 10,000 |
| 8 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 4,600 |
| 9 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ / ಅಕ್ಸುಲರಿ ನರ್ಸಿಂಗ್ ಆಂಡ್ ಮಿಡ್ವೈಫ್ | 10,000 |

| ಕ್ರ ಸಂ | ವಿದ್ಯಾಭ್ಯಾಸದ ವಿವರ (ತರಗತಿ ಅಥವಾ ಕೋರ್ಸ್ ಅಥವಾ ಗ್ರೇಡ್) | ವಾರ್ಷಿಕ ಶೈಕ್ಷಣಿಕ ಸಹಾಯಧನ ಮೊತ್ತ (ರೂ. ಗಳಲ್ಲಿ) |
|---|---|---|
| 10 | ಬಿ.ಎಡ್ | 6,000 |
| 11 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್ ಎಸ್/ ಬಿಡಿಎಸ್ /ಬಿಹೆಚ್‌ಎಮ್ ಎಸ್ ಕೋರ್ಸ್ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್ | 11,000 |
| 12 | ಎಲ್‌ಎಲ್ ಬಿ/ಎಲ್ ಎಲ್ ಎಂ | 10,000 |
| 13 | ಎಮ್.ಟೆಕ್/ ಎಮ್ ಇ (ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್) | 10,000 |
| 14 | ಎಮ್‌ಡಿ ಮೆಡಿಕಲ್ | 12,000 |
| 15 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | 11,000 |
| 16 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್‌ಇಆರ್/ ಎಐಐಎಮ್‌ಎಸ್/ ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸುಗಳು. | 11,000 |

9. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಬಿತರಿಗೆ **ರೂ. 300/- ರಿಂದ ರೂ. 20,000/-**ವರೆಗೆ
10. **ಅಪಘಾತ ಪರಿಹಾರ:** ನೊಂದಾಯಿತ ಕಟ್ಟಡ ಕಾರ್ಮಿಕರು ಮರಣ ಹೊಂದಿದ್ದಲ್ಲಿ **ರೂ. 5,00,000/-**ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ. 2,00,000/-**
11. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ)**: ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತಚಿಕಿತ್ಸೆ, ಗರ್ಭಕೋಶ ಶಸ್ತಚಿಕಿತ್ಸೆ, ಅಸ್ತಮಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿಶಸ್ತ್ರ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಕರುಳಿನ ಶಸ್ತಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆಮುರಿತ/ ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ**
12. **ಮದುವೆ ಸಹಾಯ ಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ **ತಲಾ ರೂ.60,000/-**
13. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ. 6,000/- ಗಳ** ಸಹಾಯಧನ